ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

6

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯಕಾಲ    ದಿನಾಂಕ : DATE 2/7/2020

# ಬಸವರಾಜ ಹೊರಟ್ಟಿಗೆ ಸನ್ಮಾನ



**ಬೆಂಗಳೂರು:** ವಿಧಾನ ಪರಿಷತ್ ಸದಸ್ಯರಾಗಿ 40 ವರ್ಷ ಪೂರೈಸಿದ ಹಿನ್ನೆಲೆಯಲ್ಲಿ ಪರಿಷತ್ ಹಿರಿಯ ಸದಸ್ಯರಾದ ಬಸವರಾಜ ಹೊರಟ್ಟಿ ಅವರನ್ನು ಸನ್ಮಾನ ಮಾಡಲಾಯಿತು. ವಿಧಾನಪರಿಷತ್ ಮೊಗಸಾಲೆಯಲ್ಲಿ ಪರಿಷತ್ ಸದಸ್ಯರಾದ ಕೆ. ಟಿ. ಶ್ರೀಕಂಠೇಗೌಡ, ಕೆ.ಸಿ. ಕೊಂಡಯ್ಯ, ಯು. ಬಿ. ವೆಂಕಟೇಶ್, ಚೌಡರೆಡ್ಡಿ ತೂಪಲ್ಲಿ, ತೇಜಸ್ವಿನಿ ಗೌಡ ಹಾಗೂ ಇತರರು ಮೈಸೂರು ಪೇಟ ತೊಡಿಸಿ, ಏಲಕ್ಕಿ ಹಾರ ಹಾಕಿ, ಸಿಹಿ ತಿನ್ನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಬಸವರಾಜ ಹೊರಟ್ಟಿ, ಸಾಮಾನ್ಯ ಶಿಕ್ಷಕನಾಗಿ ಇದ್ದವ ನಾನು. ನನ್ನ ಸಹಪಾಠಿ ಶಿಕ್ಷಕರು ಸುಮಾರು 40 ವರ್ಷ ಪರಿಷತ್ ಸದಸ್ಯನಾಗಿ ಆಯ್ಕೆ ಮಾಡುತ್ತ ಬಂದಿದ್ದಾರೆ. ರಾಜಕೀಯ ಬದುಕಿನಲ್ಲಿ ಯಾವತ್ತೂ ಜಾತಿ ಧರ್ಮ, ಹಣಕ್ಕೆ ಪ್ರಾಮುಖ್ಯತೆ ಕೊಟ್ಟವನಲ್ಲ, ಹೀಗಾಗಿ ಅವರ ನಿರಂತರ ಪ್ರೀತಿ ನನ್ನ ಮೇಲಿದೆ ಎಂದು ಭಾವುಕರಾಗಿ ನುಡಿದರು.